**ಕೃಷಿ ವಿಶ್ವ ವಿದ್ಯಾನಿಲಯ**

**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**

**ಜಿ.ಕೆ.ವಿ.ಕೆ., ಬೆಂಗಳೂರು–560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 03.03.2023

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 27.02.2023 | 28.02.2023 | 01.03.2023 | 02.03.2023 | 04.03.2023 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 30.0 | 29.0 | 29.2 | 29.0 | 29.4 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 14.8 | 15.4 | 18.6 | 16.8 | 15.6 |
| ಮೋಡ (ಪ್ರಮಾಣ) | 0 | 0 | 0 | 0 | 0 |
| ಆರ್ದ್ರತೆ 7.20 ಬೆ (ಶೇ) | 75 | 77 | 76 | 69 | 76 |
| ಆರ್ದ್ರತೆ 2.20 ಮ (ಶೇ) | 36 | 43 | 36 | 33 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 6.4 | 5.6 | 9.3 | 9.0 | 7.8 |
| ಗಾಳಿಯ ದಿಕ್ಕು (ಡಿಗ್ರಿ) | 140 | 90 | 90 | 90 | 90 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)

(ದಿನಾಂಕ 04–03–2023 ರಿಂದ 08–03–2023 ವರೆಗೆ)

| ನಿಯತಾಂಕಗಳು | 04.03.2023 | 05.03.2023 | 06.03.2023 | 07.03.2023 | 08.03.2023 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 31 | 32 | 32 | 32 | 32 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 17 | 18 | 18 | 18 | 18 |
| ಮೋಡ (ಪ್ರಮಾಣ) | 0 | 1 | 1 | 1 | 1 |
| ಆರ್ದ್ರತೆ 7.20 ಬೆ (ಶೇ) | 34 | 34 | 34 | 32 | 32 |
| ಆರ್ದ್ರತೆ 2.20 ಮ (ಶೇ) | 27 | 27 | 27 | 25 | 25 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 7 | 6 | 5 | 4 | 4 |
| ಗಾಳಿಯ ದಿಕ್ಕು (ಡಿಗ್ರಿ) | 72 | 111 | 112 | 112 | 112 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಾದ್ಯತೆ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ **31.0-32.0°C** ಮತ್ತು ಕನಿಷ್ಠ **17.0-18.0 °C** ಇರುವ ಸಾಧ್ಯತೆ ಇದೆ. ಬೆಳೆಗಿನ ಆರ್ದ್ರತೆ ಪ್ರಮಾಣ ಶೇ **32-34 %** ಇದ್ದು ಮಧ್ಯಾಹ್ನ **25-27 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4-7** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| | | • ಕಳೆದ ಎರಡು ತಿಂಗಳಿನಿಂದ ಒಣ ಹವೆ ಇರುವುದರಿಂದ ತೋಟಗಾರಿಕೆ ಬೆಳೆಗಳಾದ ಮಾವು, ಹಲಸು, ಹುಣಸೆ, ಸಪ್ಪೋಟ, ಬೆಟ್ಟದನೆಲ್ಲಿ ಹಾಗು ಅರಣ್ಯ ಬೆಳೆಗಳಾದ ಹೆಬ್ಬೇವು, ಬೇವು ಮುಂತಾದ ಮರಗಿಡಗಳಲ್ಲಿ ಗೆದ್ದಲು ಹುಳುಗಳ ಭಾದೆಯು ಹೆಚ್ಚಾಗಿದ್ದು ಇದರ ಹತೋಟಿಗೆ ಆಲ್ಡರಿನ್ ಕೀಟನಾಶಕದಿಂದ ಉಪಚರಿಸಿ ಗೆದ್ದಲು ಹುಳುಗಳನ್ನು ನಿಯಂತ್ರಿಸಿ.<br>• ಹಿಂಗಾರಿನಲ್ಲಿ ಬಿತ್ತನೆಯಾದ ಬೆಳೆಗಳಿಗೆ ಬೇಕಾದಲ್ಲಿ ನೀರು ಒದಗಿಸುವುದು.<br>• ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಸ್ವಚ್ಚ ಮಾಡಿ ಒಕ್ಕಣೆ ಮಾಡಿ, ಬಿಸಿಲಿನಲ್ಲಿ ಒಣಗಿಸಿ ಚೀಲದಲ್ಲಿ ಶೇಖರಿಸಿ.<br>• ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು |

| | | |
|---|---|---|
| | | ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು.<br>• ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| ಮಾವು | ಹೂವಿನ ಹಂತ, ಕಾಯಿ ಕಟ್ಟುವ ಹಂತ( ಮಿಡಿ) | 1. ಮಾವು ಬೆಳೆಯಲ್ಲಿ ಕಾಯಿ ಉದುರುವುದು ಕಂಡು ಬಂದಿದೆ. ಮಾವಿನ ಬೆಳೆ ಕಾಯಿಕಟ್ಟುವ (ಗೊಟ್ಟೆ ಹಂತ) ಹಂತದಲ್ಲಿ ಇದ್ದು, ರೈತರು ತಪ್ಪದೆ ನೀರಿನ ನೀರುಣಿಸಬೇಕು.<br>2. ನೀರಿನ ಅನುಕುಲತೆಗಳು ಹೆಚ್ಚಿಗೆ ಇದ್ದ ರೈತರು ಕಾಯಿಕಟ್ಟುವ ಹಂತದಿಂದ ಮಾಗುವ ಹಂತದವರೆಗೆ ಪ್ರತಿ 15–20 ದಿನಗಳಿಗೊಮ್ಮೆ ನೀರುಣಿಸಬೇಕು.<br>3. ಮಾವಿನಲ್ಲಿ ಕಾಯಿಗಳು ಉದುರುವುದನ್ನು ತಡೆಗಟ್ಟಲು ಗೊಟ್ಟೆ ಹಂತದಲ್ಲಿ ನ್ಯಾಪ್ತಲಿನ್ ಅಸಿಟಿಕ್ ಆಸಿಡ್ 20 ಪಿ.ಪಿ.ಎಮ್. 15 ದಿನಗಳಿಗೊಮ್ಮೆ 2 ಬಾರಿ ಕೊಡುವುದು<br>4. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>5. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.<br>1. ಮಾವಿನ ಗಿಡದ ಕೆಳಗೆ ಬೆಳೆದಿರುವ ಹುತ್ತಗಳನ್ನು ನಾಶಪಡಿಸಬೇಕು ಮತ್ತು ಗೆದ್ದಲು ಹುಳುಗಳನ್ನು ನಾಶಪಡಿಸಲು ಕ್ಲೋರೊಪೈರಿಫಾಸ್ 5–10 ಮಿ.ಲೀ/ಪ್ರತಿ ಲೀ ನಿರಿಗೆ ಬೆರಸಿ ಹುತ್ತಗಳಿಗೆ ಸುರಿಯಬೇಕು ಅಥವಾ ಒಂದು ಮೀಟರ್ ಸುತ್ತಳತೆ ಇರುವ ಹುತ್ತಕ್ಕೆ 2 ಅಲ್ಯೂಮಿನಿಯಂ ಪಾಸ್ಫೈಡ್ ಮಾತ್ರೆಗಳನ್ನು ಹಾಕಿ ಗಾಳಿ ಹೊರ ಹೋಗದಂತೆ ಎಲ್ಲಾ ರಂಧ್ರಗಳನ್ನು ಹಸಿ ಮಣ್ಣಿನಿಂದ ಮುಚ್ಚಿ. |
| **ಪಶುಸಂಗೋಪನೆ** | | 1. ಪೂರ್ವ ಮುಂಗಾರಿನಲ್ಲಿ ಹೈನುಗಾರಿಕೆಗೆ ಮೇವು ಕೊರತೆಯು ಸರ್ವೇ ಸಾಮಾನ್ಯವಾಗಿರುತ್ತದೆ, ಆದುದರಿಂದ ಮುಂಗಾರು ಮತ್ತು ಚಳಿಗಾಲದ ಬೆಳೆಗಳ ಹುಲ್ಲನ್ನು/ಮೇವನ್ನು ಸಂಗ್ರಹಿಸಲು ಕಾಳಜಿ ವಹಿಸಬೇಕು. ನಿರಾವರಿಯ ಸೌಲಭ್ಯವಿರುವವರು ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಬೆಳೆಸುವುದು ಉತ್ತಮ. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.